<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.</u>

# <u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 1060 / 2024</u>.

ಫ್ರಾ.ಸಾ.: 3
ಚಾ.ಸಾ.: 3

| | | |
|---|---|---|
| ಹೆಸರು | : | ಭೀಮಯ್ಯ |
| ತಂದೆಯ ಹೆಸರು | : | ಪೊನ್ನಪ್ಪ |
| ವಯಸ್ಸು | : | 52 ವರ್ಷ |
| ಉದ್ಯೋಗ | : | ವ್ಯವಸಾಯ |
| ವಿಳಾಸ | : | ಬೆಳ್ಳೂರು |

... ...................................................................................................... ...

ದಿನಾಂಕ 1 ನೇ ಫೆಬ್ರವರಿ 2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:-</u> <u>ಮಾನ್ಯ ಸ ಸ ಅ ರವರಿಂದ</u> : -

1. ಚಾಸಾ: 1 ಮತ್ತು 2 ರವರ ಪರಿಚಯ ಇರುತ್ತದೆ, ಅವರು ನಮ್ಮ ಪಕ್ಕದ ಮನೆಯವರು. ದಿ. 24.03.2024 ರಂದು ಸಂಜೆ 06.00 ಗಂಟೆ ಸಮಯದಲ್ಲಿ ಚಾಸಾ 1 ಮತ್ತು 2 ರವರ ಮನೆಯ ಹತ್ತಿರ ಪೊಲೀಸರು ಇದ್ದರು. ಪೊಲೀಸರು ಕೃತ್ಯ ಸ್ಥಳವನ್ನು ಪರಿಶೀಲನೆ ಮಾಡಿರುತ್ತಾರೆ. ನಂತರ ಪೊಲೀಸರು ಮಹಜರ್ ಕ್ರಮ ಜರುಗಿಸಿ ರುತ್ತಾರೆ. ಅದಕ್ಕೆ ನಾನು ಸಹಿ ಹಾಕಿರುತ್ತೇನೆ. ಸಾಕ್ಷಿಯು ಮಹಜರ್ ಅನ್ನು ನೋಡಿ ಗುರುತಿಸಿದ್ದುನ, ಅದನ್ನು ಈಗಾಗಲೇನಿ. ಪಿ. 2 ಎಂದು ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿ ಪಿ. 2 (ಬಿ) ಎಂದು ಗುರುತಿಸಲಾಯಿತು. ಮಹಜರ್‌ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತು.

2. ದಿ. 15.04.2024 ರಂದು ಪೊಲೀಸರು ಆರೋಪಿಯನ್ನು ಕರೆದುಕೊಂಡು ಬಂದು ಆರೋಪಿಯು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಕೃತ್ಯ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿರುತ್ತಾರೆ ಅದಕ್ಕೆ ನಾನು ಸಹಿಯನ್ನು ಹಾಕಿರುತ್ತೇನೆ. ಸಾಕ್ಷಿಯು ಸದರಿ ಮಹಜರ್ ಅನ್ನು ನೋಡಿ ಗುರುತಿಸಿದ್ದು ಅದನ್ನು ನಿ. ಪಿ. 11 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿ ಪಿ. 11 (ಎ) ಎಂದು ಗುರುತಿಸಲಾಯಿತು.

3. ದಿ. 27.04.2024 ರಂದು ಪೊಲೀಸರು ನ್ಯಾಯಾಲಯದ ಆದೇಶದ ಮೇರೆಗೆ ಸ್ವತ್ತು ಬಿಡುಗಡೆ ಮಹಜರ್ ಅನ್ನು ನಮ್ಮಗಳ ಸಮಕ್ಷಮ ಜರುಗಿಸಿರುತ್ತಾರೆ. ಅದಕ್ಕೆ ನಾನು ಸಹಿಯನ್ನು ಹಾಕಿರುತ್ತೇನೆ. ಸಾಕ್ಷಿಯು ಸದರಿ ಸ್ವತ್ತು ಬಿಡುಗಡೆ ಮಹಜರ್ ಅನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ. ಪಿ. 3 ಎಂದು ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿ ಪಿ. 3 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಕೃತ್ಯ ಸ್ಥಳದಲ್ಲಿ ತೆಗೆದ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ. ಪಿ. 4 ರಿಂದ 10 ಎಂದು ಗುರುತಿಸಲಾಗಿದೆ. ಆರೋಪಿಯನ್ನು ದೃಶ್ಯ ಮಾಧಮದಿಂದ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದನ್ನು ಸಾಕ್ಷಿ ನೋಡಿ ಗುರತಿತಿಸಿರುತ್ತಾರೆ. ನಾನು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ.

ಮುಖ್ಯ ವಿಚಾರಣೆ ಃ ಮುಕ್ತಾಯ

ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಂ. ಹೆಚ್. ಎನ್ ವಕೀಲರಿಂದಃ

1. ನಿ. ಪಿ. 3 ಮತ್ತು 11 ಮಹಜರ್‌ನಲ್ಲಿ ಬರೆದಿರುವ ವಿಚಾರ ನನಗೆ ನಿಖರವಾಗಿ ಗೊತ್ತಿಲ್ಲ ಎಂದರೆ ಸರಿ. ಕೃತ್ಯ ಸ್ಥಳದಲ್ಲಿ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಅದಕ್ಕೆ ನಾನು ಠಾಣೆಯಲ್ಲೇ ಮಾಡಿದ್ದೇನೆ ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಕಡೆಯಿಂದ ಯಾವುದೇ ಚಿನ್ನದ ಸರವನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಮುಕ್ತಾಯ.

ಮರು ವಿಚಾರಣೆ ಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿಬೆರಳಚ್ಚು ಮಾಡಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-

(ಸಾಕ್ಷಿಯವರ ಸಹಿ) ಸಿವಿಲ್ ನ್ಯಾಯಾಧೀಶರು

ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.